ಹದಿನೈದು ಹಳ್ಳಿಗಳಿಗೆ ಸಂಚಾರ ವ್ಯವಸ್ಥೆ ಸ್ಥಗಿತಗೊಂಡಿದೆ. ಇದಕ್ಕೆ ಯಾರು ಜವಾಬ್ದಾರರು? ಇದನ್ನು ಯಾವಾಗ ಮುಗಿಸುತ್ತೀರಿ? ನಬಾರ್ಡ್ ಸಂಸ್ಥೆಯ ಹಣವನ್ನು ಶೀಘ್ರವಾಗಿ ಉಪಯೋಗವನ್ನು ಹೇಗೆ ಮಾಡಿಕೊಳ್ಳುತ್ತೀರಿ?

ಶ್ರೀ ಧರ್ಮಸಿಂಗ್ : ಮಾನ್ಯ ಅಧ್ಯಕ್ಷರೆ, ನಬಾರ್ಡ್‌ನಿಂದ 458 ಕೋಟಿ ರೂಪಾಯಿಗಳ ಹಣ ಬಂದಿದೆ. ನಬಾಡ್‌ನಿಂದ ಪಡೆದ ಹಣದಿಂದ ಕರ್ನಾಟಕ ಕನ್‌ಸ್ಟ್ರಕ್ಷನ್ ಕಾರ್ಪೊರೇಷನ್‌ಗೆ ಕೆಲಸವನ್ನು ವಹಿಸಿ ಕೊಡಲಾಗಿದ್ದು ಅದರಿಂದ ಕೆಲಸ ಆಗಿಲ್ಲ. ಆದ್ದರಿಂದ ನಮ್ಮ ಸರ್ಕಾರ ಈ ಕಾರ್ಪೊರೇಷನ್‌ನ್ನು ಮುಚ್ಚಬೇಕು ಎಂದು ತೀರ್ಮಾನ ತೆಗೆದುಕೊಂಡಿದೆ. ಅದಕ್ಕೆ ಪರ್ಯಾಯವಾದ ವ್ಯವಸ್ಥೆ ಮಾಡಿ ಶೀಘ್ರವಾಗಿ ಈ ಕೆಲಸವನ್ನು ಪ್ರಾರಂಭ ಮಾಡುತ್ತೇವೆ. ಈ ಹಣವು ಲ್ಯಾಪ್ಸ್ ಆಗುವುದಿಲ್ಲ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೆ, ಆಂಧ್ರಪ್ರದೇಶದವರು ನಬಾರ್ಡ್‌ನಿಂದ ಸಾವಿರಾರು ಕೋಟಿ ರೂಪಾಯಿ ಹಣವನ್ನು ಪಡೆದು ಉಪಯೋಗ ಮಾಡಿಕೊಂಡಿದ್ದಾರೆ. ಆದರೆ ನಮ್ಮಲ್ಲಿ 458 ಕೋಟಿ ರೂಪಾಯಿ ಹಣವನ್ನು ಪಡೆದು ಅದನ್ನು ಸಹ ಖರ್ಚು ಮಾಡಲು ಆಗಿಲ್ಲ.

ಶ್ರೀ ಧರ್ಮಸಿಂಗ್ : ನಬಾರ್ಡ್‌ನ ಕೆಲಸ 1996ರಲ್ಲಿ ಪ್ರಾರಂಭವಾಯಿತು. ಅದರ ಹಣ ಲ್ಯಾಪ್ಸ್ ಆಗುವುದಿಲ್ಲ. ಎರಡನೇ ಹಂತದ ಕಾಮಗಾರಿಗೆ ಅಕ್ಟೋಬರ್‌ವರೆಗೆ ಅವಕಾಶವನ್ನು ಕೊಟ್ಟಿದ್ದಾರೆ. ಮೂರನೇ ಹಂತದ ಕಾಮಗಾರಿಗೆ 2001ರ ಮಾರ್ಚ್‌ವರೆಗೆ ಅವಕಾಶವನ್ನು ಕೊಟ್ಟಿದ್ದಾರೆ. ನಬಾರ್ಡ್ ಅಧ್ಯಕ್ಷರು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ್ದಾರೆ. ಮಾನ್ಯ ಮುಖ್ಯ ಮಂತ್ರಿಗಳು ಸಹ ಇದರ ಬಗ್ಗೆ ಹೆಚ್ಚು ಗಮನಹರಿಸಬೇಕೆಂದು ನಮಗೆ ಪತ್ರವನ್ನು ಬರೆದಿದ್ದಾರೆ. ಇದರ ಬಗ್ಗೆ ನಾವು ಈಗಾಗಲೇ ಹಲವಾರು ಸಭೆಗಳನ್ನು ಮಾಡಿದ್ದೇವೆ. ಇದರ ಬಗ್ಗೆ ಸರಿಯಾದ ಗಮನಹರಿಸಿ ಕೆಲಸ ಪೂರ್ಣಮಾಡುವ ವ್ಯವಸ್ಥೆ ಮಾಡುತ್ತೇವೆ.

ಚಿಕ್ಕಬಳ್ಳಾಪುರದಲ್ಲಿ ಮಿನಿವಿಧಾನಸೌಧ ನಿರ್ಮಿಸುವುದು

164 (1737) ಶ್ರೀಮತಿ ಅನುಸೂಯಮ್ಮ ನಟರಾಜನ್ ಕೆ.ವಿ. : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚಿಕ್ಕಬಳ್ಳಾಪುರದಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಸದ್ಯಕ್ಕೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಮತಿ ಕೆ.ವಿ. ಅನುಸೂಯಮ್ಮ ನಟರಾಜನ್ : ಮಾನ್ಯ ಅಧ್ಯಕ್ಷರೇ, ಮಾನ್ಯ ಮಂತ್ರಿಗಳು ಚಿಕ್ಕಬಳ್ಳಾಪುರದಲ್ಲಿ ಮಿನಿ ವಿಧಾನ ಸೌಧ ನಿರ್ಮಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ ಎಂದು ತಮ್ಮ ಉತ್ತರದಲ್ಲಿ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ನಮ್ಮ ಚಿಕ್ಕಬಳ್ಳಾಪುರ ಸಬ್ ಡಿವಿಷನ್ ಹೆಡ್ ಕ್ವಾರ್ಟರ್ ಆಗಿದ್ದು, ಇಲ್ಲಿ ನಗರಸಭೆ ಕೂಡ ಇದೆ. ಈಗಾಗಲೇ

ಗೌರಿಬಿದನೂರು, ಶ್ರೀನಿವಾಸಪುರ, ಚಿಂತಾಮಣಿ ಶಿಡ್ಲಘಟ್ಟ ಮತ್ತು ಮಾಲೂರುಗಳಲ್ಲಿ ಮಿನಿ ವಿಧಾನಸೌಧದ ಕೆಲಸಗಳೆಲ್ಲಾ ಪೂರ್ಣಗೊಂಡಿವೆ. ಬಾಗಲಕೋಟೆಯಲ್ಲಿ ಇನ್ನೂ ಕೆಲಸ ನಡೆಯುತ್ತಿದೆ. ಇವೆಲ್ಲಾ ಬಹಳ ಸಂತೋಷದ ವಿಚಾರ. ಆದರೆ ಹೆಡ್ ಕ್ವಾರ್ಟರ್ಸ್ ಆದ ಚಿಕ್ಕಬಳ್ಳಾಪುರದಲ್ಲೂ ಕೂಡ ಒಂದು ಮಿನಿ ವಿಧಾನ ಸೌಧವನ್ನು ನಿರ್ಮಿಸಲು ಮಂಜೂರಾತಿ ಕೊಡಬೇಕೆಂದು ನಾನು ತಮ್ಮ ಮೂಲಕ ಮಾನ್ಯ ಮಂತ್ರಿಗಳಲ್ಲಿ ಸವಿನಯ ಪ್ರಾರ್ಥನೆ ಮಾಡಿಕೊಳ್ಳುತ್ತಿದ್ದೇನೆ.

ಶ್ರೀ ಧರ್ಮಸಿಂಗ್ : ಮಾನ್ಯ ಅಧ್ಯಕ್ಷರೇ, ಮಾನ್ಯ ಸದಸ್ಯರು ಚಿಕ್ಕಬಳ್ಳಾಪುರದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಬೇಕೆಂದು ಕೋರಿದ್ದಾರೆ. ಆ ಬಗ್ಗೆ ಕಂದಾಯ ಇಲಾಖೆಯಿಂದ ಪ್ರಸ್ತಾವನೆ ಬಂದನಂತರ ಅದರ ನಿರ್ಮಾಣದ ಕೆಲಸವನ್ನು ತೆಗೆದುಕೊಳ್ಳತಕ್ಕ ಪ್ರಯತ್ನ ಮಾಡಲಾಗುತ್ತದೆ ಎಂದು ನಾನು ಮಾನ್ಯ ಸದಸ್ಯರಿಗೆ ತಮ್ಮ ಮೂಲಕ ತಿಳಿಸಬಯಸುತ್ತೇನೆ.

ದೊಡ್ಡಬಳ್ಳಾಪುರ ಕ್ಷೇತ್ರದ ರಸ್ತೆಗಳ ದುರಸ್ತಿಕಾರ್ಯ

165 (1684) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಯ ರಸ್ತೆಗಳು ಗುಂಡಿ ಬಿದ್ದು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡಿರುವ ಕ್ರಮವೇನು?

ಆ) 1996-97, 1997-98, 1998-99ನೇ ಸಾಲಿನಲ್ಲಿ ತಾಲ್ಲೂಕಿನಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು? (ವಿವರ ನೀಡುವುದು) ; ಈ ಕಾಮಗಾರಿಗೆ ಎಷ್ಟು ಹಣ ಒದಗಿಸಲಾಗಿದೆ?

ಇ) ಲೋಕೋಪಯೋಗಿ ಇಲಾಖೆಯ ನಿರ್ವಹಣೆಯಲ್ಲಿ ಬರುವ ಶಾಲಾ ಕಟ್ಟಡಗಳ ದುರಸ್ತಿಗೆ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಯ ಹಲವು ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಬಹುತೇಕ ಗುಂಡಿಗಳನ್ನು ಈಗ ಮುಚ್ಚಲಾಗಿದ್ದು, ಪ್ರಕೃತಿ ವಿಕೋಪ ಪರಿಹಾರ ನಿಧಿಯಲ್ಲಿ ಯಲಹಂಕ-ಹಿಂದೂಪುರ ರಾಜ್ಯ ಹೆದ್ದಾರಿ-9 ಅನ್ನು 50.00 ಲಕ್ಷ ರೂ.ಗಳ ಅಂದಾಜಿನಲ್ಲಿ ದುರಸ್ತಿ ಕೈಗೊಳ್ಳಲಾಗಿದೆ. ಯೋಜನೇತರ ಅನುದಾನದಲ್ಲಿ ವಾರ್ಷಿಕ ನಿರ್ವಹಣೆ ಮಾಡಲಾಗಿದೆ.

ಆ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ 1996-97, 1997-98 ಮತ್ತು 1998-99ನೇ ಸಾಲಿನಲ್ಲಿ ಒಟ್ಟು ಕೈಗೊಂಡಿರುವ ಕಾಮಗಾರಿಗಳು 102 ಅವುಗಳ ಅಂದಾಜು ಮೊತ್ತ 258.46 ಲಕ್ಷ ರೂ.ಗಳು ಹಾಗೂ ಈ ಕಾಮಗಾರಿಗಳಿಗೆ 204.83 ಲಕ್ಷ ರೂ.ಗಳ ಹಣ ಒದಗಿಸಲಾಗಿದೆ. ಈ ಮೂರು ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳ ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

ಇ) ಶಾಲಾ ಕಟ್ಟಡಗಳ ದುರಸ್ತಿ ಲೋಕೋಪಯಾಗಿ ಇಲಾಖೆ ವ್ಯಾಪ್ತಿಯಲ್ಲಿ ಬರುವುದಿಲ್ಲ.